ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
ವಿಶ್ವೇಶ್ವರಯ್ಯ ಕೇಂದ್ರ, ಚಿಕ್ಕ ಗೋಪುರ, ಮೂರನೇ ಮಹಡಿ,
ಡಾ॥ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001, ಕರ್ನಾಟಕ
E-mail ID:icps.kar@gmail.com Phone No: 080-22867381-2-3

ಸಂಖ್ಯೆ: ಕೆಎಸ್‌ಐಸಿಪಿಎಸ್/ತಂಮಿಕ/ಕಿ/3/2020-21 ದಿನಾಂಕ: 08-5-2021

ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,
ನಂ.17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ,
ಬೆಂಗಳೂರು.

ಮಾನ್ಯರೇ,

ವಿಷಯ: ಕೋವಿಡ್-19 2ನೇ ಅಲೆ ಹಿನ್ನೆಲೆಯಲ್ಲಿ ಸೋಂಕು ಹರಡುವುದು ಹೆಚ್ಚಾಗುತ್ತಿದ್ದು, ಮಕ್ಕಳ ರಕ್ಷಣೆಗೆ ಸ್ವಯಂ ಸೇವಕರನ್ನು ಆಹ್ವಾನಿಸುವ ಬಗ್ಗೆ ಪತ್ರಿಕಾ ಪ್ರಕಟನೆ ನೀಡುವ ಕುರಿತು

********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ನಿರ್ಲಕ್ಷತೆಗೊಳಗಾದ, ಪರಿತ್ಯಜಿಸಲ್ಪಟ್ಟ, ಒಪ್ಪಿಸಲ್ಪಟ್ಟ, ದೌರ್ಜನ್ಯಕ್ಕೆ ಒಳಗಾದ, ಶೋಷಣೆಗೆ ಒಳಗಾದ ಮತ್ತು ಕುಟುಂಬದಿಂದ ಬೇರ್ಪಟ್ಟ ಮಕ್ಕಳು ದುರ್ಬಲ ಸ್ಥಿತಿಗೆ ತಲುಪದಿರುವಂತೆ ತಡೆಯಲು ಹಾಗೂ ಇಂತಹ ಪ್ರಕರಣಗಳನ್ನು ಕಡಿಮೆ ಮಾಡಲು ಮತ್ತು ಸಂಕಷ್ಟದಲ್ಲಿರುವ ಮಕ್ಕಳ ಪರಿಸ್ಥಿತಿಯನ್ನು ಉತ್ತಮಪಡಿಸುವ ಉದ್ದೇಶವನ್ನು ಹೊಂದಿರುವ ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ.

ಕೋವಿಡ್-19 2ನೇ ಅಲೆ ಹಿನ್ನೆಲೆಯಲ್ಲಿ ಸೋಂಕು ಹರಡುವುದು ಹೆಚ್ಚಾಗುತ್ತಿದ್ದು, ಇಂತಹ ಸಂಧರ್ಭದಲ್ಲಿ ಮಕ್ಕಳ ರಕ್ಷಣೆ ಮಾಡುವುದು ಎಲ್ಲರ ಕರ್ತವ್ಯವಾಗಿರುತ್ತದೆ. ಆದ್ದರಿಂದ ಮಕ್ಕಳ ರಕ್ಷಣೆ ಕಾರ್ಯ ವ್ಯಾಪಕವಾಗಿ ನಡೆಯಬೇಕಾಗಿದ್ದು ಸದರಿ ಕಾರ್ಯಕ್ಕೆ ಸ್ವಯಂ ಸೇವಕರ ಅವಶ್ಯಕತೆಯಿರುತ್ತದೆ. ಆದುದರಿಂದ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಲು ಸಿದ್ಧವಿರುವವರಿಗಾಗಿ ನಿರ್ದೇಶನಾಲಯದ ವೆಬ್‌ಸೈಟ್ ಮೂಲಕ ಅರ್ಜಿ ಆಹ್ವಾನ ಮಾಡಲಾಗಿದೆ. ಈ ಕುರಿತಂತೆ ಸಾರ್ವಜನಿಕರಿಗೆ ಹೆಚ್ಚಿನ ಪ್ರಚಾರ ಮಾಡಬೇಕಾಗಿರುವುದರಿಂದ ಪತ್ರಿಕಾ ಪ್ರಕಟಣೆ ನೀಡಲು ಕೋರಲಾಗಿದೆ.

ತಮ್ಮ ವಿಶ್ವಾಸಿ,
08.05.2021
ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು.

ಪತ್ರಿಕಾ ಪ್ರಕಟಣೆ

ವಿಷಯ: ಕೋವಿಡ್-19 2ನೇ ಅಲೆ ಹಿನ್ನೆಲೆಯಲ್ಲಿ ಸೋಂಕು ಹರಡುವುದು ಹೆಚ್ಚಾಗುತ್ತಿದ್ದು, ಮಕ್ಕಳ ರಕ್ಷಣೆಗೆ ಸ್ವಯಂ ಸೇವಕರನ್ನು ಆಹ್ವಾನಿಸುವ ಬಗ್ಗೆ

********

ಕೋವಿಡ್-19 2ನೇ ಅಲೆ ಹಿನ್ನೆಲೆಯಲ್ಲಿ ಸೋಂಕು ಹರಡುವುದು ಹೆಚ್ಚಾಗುತ್ತಿದ್ದು, ಇಂತಹ ಸಂಧರ್ಭದಲ್ಲಿ ಮಕ್ಕಳ ರಕ್ಷಣೆ ಮಾಡುವುದು ಎಲ್ಲರ ಕರ್ತವ್ಯವಾಗಿರುತ್ತದೆ. ಆದ್ದರಿಂದ ಮಕ್ಕಳ ರಕ್ಷಣೆ ಕಾರ್ಯ ವ್ಯಾಪಕವಾಗಿ ನಡೆಯಬೇಕಾಗಿದ್ದು ಸದರಿ ಕಾರ್ಯಕ್ಕೆ ಸ್ವಯಂ ಸೇವಕರ ಅವಶ್ಯಕತೆಯಿರುತ್ತದೆ. ಆದುದರಿಂದ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಲು ಆಸಕ್ತಿ ಇರುವ ವ್ಯಕ್ತಿಗಳು(Individuals) ನಿರ್ದೇಶನಾಲಯದ ವೆಬ್‌ಸೈಟ್ icps.karnataka.gov.in ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಲು ಕೋರಲಾಗಿದೆ.

08.05.2021

ನಿರ್ದೇಶಕರು,

ಮಕ್ಕಳ ರಕ್ಷಣಾ ನಿರ್ದೇಶನಾಲಯ

ಬೆಂಗಳೂರು.